ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಮೂಲಭೂತ ಸೌಕರ್ಯ ವಂಚಿತವಾಗಿರುವ ಬಗ್ಗೆ

ಶ್ರೀ ಸಿ. ಆರ್. ಮನೋಹರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1091 (1136) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪುರಸಭೆಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) 2017-18ರಿಂದ 2019-20ನೇ ಸಾಲಿನಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ವಿಶೇಷ ಅಭಿವೃದ್ಧಿ (ಎಸ್.ಎಫ್.ಸಿ) ಹಾಗೂ ಇತರೆ ಯಾವುದೆ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಮಂಜೂರಾಗಿರುವ ಅನುದಾನದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ತಡೆಹಿಡಿದಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅನುದಾನವನ್ನು ತಡೆಹಿಡಿದಿರುವುದರಿಂದ ಪುರಸಭೆಯು ಮೂಲಭೂತ ಸೌಲಭ್ಯಗಳಿಂದ ಕುಂಠಿತವಾಗುವುದಿಲ್ಲವೇ ; ತಡೆಹಿಡಿದಿರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು ? (ಪೂರ್ಣ ಮಾಹಿತಿ ನೀಡುವುದು)